RNU AIR DHARWAD

NOVEMBER 01, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

71 ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ, ನಾಡಿನ ವಿವಿಧೆಡೆಗಳಲ್ಲಿ ಸಂಭ್ರಮ ಹಾಗೂ ಸಡಗರದಿಂದ ಜರುಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ರಕ್ಷಣಾ ಖಾತೆ ಸಚಿವ ರಾಜನಾಥ ಸಿಂಗ್, ಶಿಕ್ಷಣ ಖಾತೆ ಸಚಿವ ಪ್ರಲ್ಹಾದ್ ಜೋಶಿ, ಉಕ್ಕು ಮತ್ತು ಬೃಹತ್ ಕೈಗಾರಿಕೆಗಳ ಖಾತೆ ಸಚಿವ ಹೆಚ್.ಡಿ ಕುಮಾರಸ್ವಾಮಿ ಸೇರಿದಂತೆ ಗಣ್ಯರು, ಕನ್ನಡ ನಾಡಿನ ಜನತೆಗೆ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳನ್ನು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಕರ್ನಾಟಕ ರಾಜ್ಯೋತ್ಸವದ ಸಂದರ್ಭ, ಕನ್ನಡನಾಡಿನ ಜನತೆಗೆ ಶುಭಾಶಯಗಳನ್ನು ಕೋರಿದ್ದಾರೆ. 'ಕರ್ನಾಟಕವು ಶ್ರೀಮಂತ ಪರಂಪರೆ, ಗಮನಾರ್ಹ ಸಾಧನೆಗಳು ಮತ್ತು ಅಪಾರ ಸಾಧ್ಯತೆಗಳ ನಾಡಾಗಿದೆ, ಇದರ ವೈಭವೋಪೇತ ಪಾರಂಪರಿಕ ಶ್ರೇಷ್ಠತೆ, ಆಚಾರ, ವಿಚಾರಗಳು, ದೇಶದ ಸಾಂಸ್ಕೃತಿಕ ಭವ್ಯತೆಯನ್ನು ಮತ್ತಷ್ಟು ಶ್ರೀಮಂತಗೊಳಿಸಿವೆ' ಎಂದು ಬಣ್ಣಿಸಿದ್ದಾರೆ.

<><><>

ಕರ್ನಾಟಕ ರಾಜ್ಯೋತ್ಸವದ ಪ್ರಧಾನ ಕಾರ್ಯಕ್ರಮ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ, ಬೆಂಗಳೂರಿನ ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಜರುಗಿತು. ಬೆಳಗ್ಗೆ 9 ಗಂಟೆ 30 ನಿಮಿಷಕ್ಕೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿ, ರಾಜ್ಯೋತ್ಸವದ ಸಂದೇಶ ನೀಡಿದರು. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಆಯೋಜಿತ, ಚಳಿಗಾಲದ ವಿಧಾನಮಂಡಲ ಅಧಿವೇಶನದಲ್ಲಿ, ಹಳದಿ ಹಾಗೂ ಕೆಂಬಣ್ಣದ ಕನ್ನಡ ಬಾವುಟಕ್ಕೆ ಅಧಿಕೃತ ಧ್ವಜದ ಸ್ಥಾನಮಾನ ನೀಡುವ ನಿಟ್ಟಿನಲ್ಲಿ, ಚರ್ಚಿಸಲಾಗುವುದು ಎಂದರು.

<><><>

'ಸಿ.ಎಂ ವಿದ್ಯಾರ್ಥಿ ಸಹಾಯಹಸ್ತ' ಯೋಜನೆ ಹಾಗೂ ನಗರ ಪ್ರದೇಶದ ಶಾಲಾ ವಿದ್ಯಾರ್ಥಿಗಳಿಗೆ, ಗ್ರಾಮೀಣ ಜೀವನದ ನೈಜ ಅನುಭವ ನೀಡುವ, 'ಗ್ರಾಮಾನುಭವ' ಕಾರ್ಯಕ್ರಮಕ್ಕೆ, ರಾಜ್ಯೋತ್ಸವದ ಪ್ರಧಾನ ಸಮಾರಂಭದಲ್ಲಿ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಚಾಲನೆ ನೀಡಿದರು. ಕಾರ್ಯಕ್ರಮದಡಿ, ನಗರ ಪ್ರದೇಶದ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ, 8, 9 ಮತ್ತು 11ನೇ ತರಗತಿಯ ವಿದ್ಯಾರ್ಥಿಗಳು, ಈ ಯೋಜನೆ ಲಾಭ ಪಡೆಯಲಿದ್ದಾರೆ. ಗ್ರಾಮಾನುಭವ ಕಾರ್ಯಕ್ರಮ, ಶ್ರಮದ ಘನತೆ, ಕೃಷಿ, ಸಾಂಪ್ರದಾಯಿಕ ಜ್ಞಾನ, ಸ್ಥಳೀಯ ಸಂಸ್ಕೃತಿ ಮತ್ತು ಸುಸ್ಥಿರ ಜೀವನಶೈಲಿಯ ಅರಿವನ್ನು ಮೂಡಿಸಲಿದೆ.

<><><>

ಬೆಂಗಳೂರು ನಗರದ ಜೆ.ಸಿ ರಸ್ತೆಯ ರವೀಂದ್ರ ಕಲಾಕ್ಷೇತ್ರದಲ್ಲಿ, ಇಂದು ಸಂಜೆ 6.30 ಕ್ಕೆ, ಒಟ್ಟು 26 ವಿವಿಧ ಕ್ಷೇತ್ರಗಳ 71 ಜನ ಸಾಧಕರಿಗೆ, ಪ್ರತಿಷ್ಟಿತ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಯನ್ನು, ಮುಖ್ಯಮಂತ್ರಿಯವರು, ಪ್ರದಾನಿಸಿ, ಗೌರವಿಸಲಿದ್ದಾರೆ. ಸಂಕೀರ್ಣ ವಿಭಾಗದಲ್ಲಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ, ಉತ್ತರ ಕನ್ನಡ ಜಿಲ್ಲೆ, ಹೊನ್ನಾವರದ ಗಜಾನನ ಉಮಾಮಹೇಶ್ವರ ಭಟ್ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಗಜಾನನ ಉಮಾಮಹೇಶ್ವರ ಭಟ್ ಧ್ವನಿ– 39 ಸೆಕೆಂದುಗಳು

<><><>

ಧಾರವಾಡದ ಆರ್,ಎನ್ ಶೆಟ್ಟಿ ಕ್ರೀಡಾಂಗಣದಲ್ಲಿ ಆಯೋಜಿತ 71 ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡ, ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಧ್ವಜಾರೋಹಣ ನೆರವೇರಿಸಿ, ನಾಡಿನ ಜನತೆಗೆ ರಾಜ್ಯೋತ್ಸವದ ಶುಭಾಶಯ ಕೋರಿದರು. ನಾಡದೇವತೆ ಭುವನೇಶ್ವರಿ ತಾಯಿಗೆ ಪುಷ್ಪ ನಮನ ಸಲ್ಲಿಸಿದ ಅವರು, ಕನ್ನಡ ನಾಡಿನ ಏಕೀಕರಣಕ್ಕೆ ಶ್ರಮಿಸಿದ ಆಲೂರು ವೆಂಕಟರಾಯರು, ಹುಯಿಲಗೋಳ ನಾರಾಯಣ ರಾಯರು, ವರಕವಿ ದ.ರಾ ಬೇಂದ್ರೆ, ಪಾಟೀಲ ಪುಟ್ಟಪ್ಪ ಅವರ ಸಾಂಸ್ಕೃತಿಕ ಹಾಗೂ ಸಾಹಿತಿಕ ಕೊಡುಗೆಗಳನ್ನು ಸ್ಮರಿಸಿದರು.

<><><>

ಹಾವೇರಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿತ, 71 ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ, ಸಕ್ಕರೆ ಮತ್ತು ಜವಳಿ ಖಾತೆ ಸಚಿವ ರುದ್ರಪ್ಪ ಲಮಾಣಿ ಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವದ ಶುಭಾಶಯಗಳನ್ನು ಕೋರಿದರು.

<><><>

ವಿಜಯಪುರದಲ್ಲಿ ಆಯೋಜಿತ, ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ರಾ ್ಷ್ ಧ್ವಜಾರೋಹಣ ನೆರವೇರಿಸಿ, ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ, ರಾಜ್ಯೋತ್ಸವ ಸಂದೇಶ ನೀಡಿದರು. ಇದಕ್ಕೂ ಮೊದಲು, ನಗರದ ಸಿದ್ದೇಶ್ವರ ದೇವಸ್ಥಾನದಿಂದ, ತಾಯಿ ಭುವನೇಶ್ವರಿ ಭಾವಚಿತ್ರ ಮೆರವಣಿಗೆ ಹಾಗೂ ಆಕ ್ರ್ಷಕ ಸ್ತಬ್ಧಚಿತ್ರ ಮೆರವಣಿಗೆ ಜರುಗಿತು.

<><><>

ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿತ, ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಕನ್ನಡ ಮತ್ತು ಸಂಸ್ಕೃತಿ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಚಾಲನೆ ನೀಡಿದರು.

<><><>

ಹಾಸನ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಆಯೋಜಿತ, 3 ಸಾವಿರ ಅಡಿ ಉದ್ದದ, ಕನ್ನಡ ಧ್ವಜ ಮೆರವಣಿಗೆಗೆ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ ಶಿವಲಿಂಗೇಗೌಡ ಚಾಲನೆ ನೀಡಿದರು.

<><><>

ಗ್ರೇಟರ ಬೆಂಗಳೂರು ಪ್ರಾಧಿಕಾರದ ಆವರಣದಲ್ಲಿ ಆಯೋಜಿತ, ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ, ಪ್ರಾಧಿಕಾರದ ಆಯುಕ್ತ ಮಹೇಶ್ವರ ರಾವ್ ಧ್ವಜಾರೋಹಣ ನೆರವೇರಿಸಿ, ನಾಡದೇವಿ ಭುವನೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸಿ, ಗೌರವ ಸಮರ್ಪಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>